ನಿಯಮ-72
ಕ್ರಮಸಂಖ್ಯೆ-130

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 144 ಹೆಚ್‌ಪಿಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:30.11.2021

**ಇವರಿಂದ,**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಉನ್ನತ ಶಿಕ್ಷಣ ಇಲಾಖೆ,

**ಇವರಿಗೆ**

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ/ಪರಿಷತ್ತು,
ವಿಧಾನಸೌಧ
ಬೆಂಗಳೂರು

ಮಾನ್ಯರೆ,

**ವಿಷಯ:** ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಮತ್ತು ಶ್ರೀ ಕೆ.ಟಿ.ಶ್ರೀಕಂಠೇಗೌಡ ಇವರ ನಿಯಮ-72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ ಒದಗಿಸುತ್ತಿರುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಮತ್ತು ಶ್ರೀ ಕೆ.ಟಿ.ಶ್ರೀಕಂಠೇಗೌಡ ಇವರ ನಿಯಮ-72ರ ಅಡಿಯಲ್ಲಿನ ಗಮನ ಸೆಳೆಯುವ ಸೂಚನೆ ಉತ್ತರದ 20 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

**ತಮ್ಮ ನಂಬುಗೆಯ,**

Nagarathna M.P

(ಎಂ.ಪಿ.ನಾಗರತ್ನ)
ಶಾಖಾಧಿಕಾರಿ,
ಉನ್ನತ ಶಿಕ್ಷಣ ಇಲಾಖೆ (ಯೋಜನೆ)

ಪ್ರ-72
ಕ್ರಮಸಂಖ್ಯೆ-130

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ ಮತ್ತು ಶ್ರೀ ಕೆ.ಟಿ.ಶ್ರೀಕಂಠೇಗೌಡ ಇವರುಗಳು ನಿಯಮ-72 ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

*********

**ವಿಷಯ:**

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅರೆಕಾಲಿಕ (Unskilled) ಗ್ರೂಪ್-ಡಿ ಗುಂಪಿನ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಆದೇಶ ಸಂಖ್ಯೆ: ಇಡಿ 88 ಹೆಚ್‌ಪಿಸಿ 2021ರ ದಿನಾಂಕ: 24.08.2021 ರಂತೆ ರೂ.18,000/-ಗಳ ಸಂಬಳವನ್ನು ವಿತರಿಸದೇ ಇರುವ ಹಾಗೂ ಅವರನ್ನು ಅನಿಯಮಿತವಾಗಿ ನೌಕರಿಯಿಂದ ತೆಗೆದು ಪುನ: ನೇಮಿಸಿಕೊಳ್ಳದಿರುವ ಬಗ್ಗೆ ಮತ್ತು ಅತ್ಯಂತ ಕಷ್ಟ ಜೀವಿಗಳಾದ ಅವರನ್ನು ಖಾಯಂ ಮಾಡುವ ಬಗ್ಗೆ.

**ಉತ್ತರ :**

2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 110ರಂತೆ ರಾಜ್ಯದ ಆಯ್ದ ಮಹಾನಗರ ಪಾಲಿಕೆಗಳಲ್ಲಿ ಪ್ರಾಯೋಗಿಕವಾಗಿ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.

ಅದರಂತೆ ಸಂಜೆ ಕಾಲೇಜು ಪ್ರಾರಂಭಿಸುವ ಬಗ್ಗೆ, ಸರ್ಕಾರದ ಆದೇಶ ಸಂಖ್ಯೆ: ಇಡಿ 88 ಹೆಚ್ ಪಿಸಿ 2021, ದಿನಾಂಕ: 24/8/2021ರಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಲಭ್ಯವಿರುವ ಮೂಲಭೂತ ಸೌಕರ್ಯಗಳನ್ನು ಉಪಯೋಗಿಸಿಕೊಂಡು, ವಿದ್ಯಾರ್ಥಿಗಳು ಹೆಚ್ಚಾಗಿ ಆಯ್ಕೆ ಮಾಡಿಕೊಳ್ಳುವ ಮತ್ತು ಉದ್ಯೋಗವಕಾಶಗಳಿಗೆ ಅವಕಾಶ ಕಲ್ಪಿಸುವ ಕೋರ್ಸುಗಳಾದ ಬಿ.ಕಾಂ., ಮತ್ತು ಬಿ.ಸಿ.ಎ., ಗಳನ್ನು ಸಂಧ್ಯಾಶಕ್ತಿ ಯೋಜನೆಯಡಿಯಲ್ಲಿ ರಾಜ್ಯದ ಆಯ್ದ 11 ನಗರ ಪಾಲಿಕೆಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಸಂಜೆ ಕಾಲೇಜು ಪ್ರಾರಂಭಿಸಲು ಕೆಲವು ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಆದೇಶವು ಹೊರಗುತ್ತಿಗೆ ಆಧಾರದ ಮೇಲೆ ನೇಮಕವಾಗುವ ನೌಕರರಿಗೆ ಅನ್ವಯಿಸುವುದಿಲ್ಲ.

ಪ್ರಸ್ತಾಪಿಸಿರುವಂತೆ, ಅರೆಕಾಲಿಕ (Unskilled) ಗ್ರೂಪ್-ಡಿ ನೌಕರರಿಗೆ ರೂ.18000/- ಸಂಬಳವನ್ನು ವಿತರಿಸದೆ ಇರುವ ಹಾಗೂ ಅವರನ್ನು ಅನಿಯಮಿತವಾಗಿ ನೌಕರಿಯಿಂದ ತೆಗೆದು ಪುನ: ನೇಮಿಸಿಕೊಳ್ಳದಿರುವ ಬಗ್ಗೆ ಮತ್ತು ಅತ್ಯಂತ ಕಷ್ಟ ಜೀವಿಗಳಾದ ಅವರನ್ನು ಖಾಯಂ ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ/3/ಟಿಎಫ್‌ಪಿ/2017, ದಿನಾಂಕ: 07.07.2017 ರಲ್ಲಿ ಸ್ವಾದಿಲ್ವಾರು ವೆಚ್ಚ ಕೈಪಿಡಿ ನಿಯಮ-55 (2) (ಬಿ)ನ್ನು ರದ್ದುಪಡಿಸಿ, ಯಾವುದೇ ಅಂಶಕಾಲಿಕ, ಅಕುಶಲ/ಅನಿಪುಣ ಕೆಲಸಗಾರರನ್ನು ನೇಮಿಸಿಕೊಳ್ಳಬಾರದೆಂದು ಆದೇಶಿಸಿದೆ. ಇಂತಹ ಕೆಲಸಗಳಿಗೆ ಸೇವಾಗುತ್ತಿಗೆ ಮೂಲಕ ನಿರ್ವಹಿಸುವಂತೆ ಹಾಗೂ ಇದಕ್ಕೆ ತಗಲುವ ವೆಚ್ಚವನ್ನು '051-ಸಾಮಾನ್ಯ ವೆಚ್ಚಗಳು' ರಡಿಯಲ್ಲಿ ಭರಿಸುವಂತೆ, ಈ ಸಂದರ್ಭದಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಗ್ರೂಪ್-ಡಿಗಳ ಸೇವೆಯನ್ನು ಅವರ ನೇಮಕಾತಿ ಅವಧಿ ಪೂರೈಸಿದ ಕೂಡಲೇ ಬರಖಾಸ್ತು/ಮುಕ್ತಾಯ ಮಾಡತಕ್ಕದ್ದು ಎಂದು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ/3/ಟಿಎಫ್‌ಪಿ/2012, ದಿನಾಂಕ:25.06.2012ರಲ್ಲಿ ಆದೇಶಿಸಿದೆ.

ಆರ್ಥಿಕ ಇಲಾಖೆಯ ಆದೇಶದಂತೆ ರಾಜ್ಯದ ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅನ್‌ಸ್ಕಿಲ್ಡ್/ಅರೆಕಾಲಿಕ ಗ್ರೂಪ್-ಡಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದವರನ್ನು ಅವಧಿಯು ಮುಗಿದ ನಂತರ ಸೇವೆಯಿಂದ ಬಿಡುಗಡೆ ಮಾಡಲಾಗಿದೆ.

ಆದ್ದರಿಂದ ಪ್ರಸ್ತುತ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅನ್‌ಸ್ಕಿಲ್ಡ್/ಅರೆಕಾಲಿಕ ಗ್ರೂಪ್-ಡಿ ನೌಕರರು ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲ. ಸದರಿ ಕೆಲಸಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವಾ ಗುತ್ತಿಗೆ ಏಜೆನ್ಸಿ ಮೂಲಕ ಕನಿಷ್ಠ ವೇತನ ಕಾಯ್ದೆಯನ್ವಯ ವಲಯವಾರು ನಿಗದಿಪಡಿಸಿರುವ ಸಂಭಾವನೆಯನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಆದ್ದರಿಂದ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ
ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು
ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

ಸಂಖ್ಯೆ: ಇಡಿ 144 ಹೆಚ್ ಪಿಸಿ 2021)